ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 05ನೇ ಫೆಬ್ರವರಿ, 2013

(ಸಮಯ: ಬೆಳಿಗ್ಗೆ 11.00 ಗಂಟೆಗೆ)

- - -

1 . ಸಂತಾಪ ಸೂಚನೆ

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2013ರ ಫೆಬ್ರವರಿ 4ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"

ಎಂದು ಶ್ರೀ ವೀರಣ್ಣ ಚರಂತಿಮಠ ಅವರು ಸೂಚಿಸುವುದು.

ಶ್ರೀ ಬಿ.ಎನ್. ವಿಜಯ್‌ಕುಮಾರ್ ಅವರು ಅನುಮೋದಿಸುವುದು.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್. ಎಸ್. ಪ್ರಕಾಶ, ವೆಂಕಟರಾವ್ ನಾಡಗೌಡ ಮತ್ತು ಸುನೀಲ್ ವಿ. ಹೆಗಡೆ ಅವರುಗಳು ಹಾಸನ ಜಿಲ್ಲೆಯ ಹೇಮಾವತಿ ಕೊಳ್ಳ ಪ್ರದೇಶದ ಕಾಮಗಾರಿಗಳಿಗೆ ಹೆಚ್ಚಿನ ಅನುದಾನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಹೆಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಎಸ್. ಪುಟ್ಟರಾಜು, ಹೆಚ್. ಎಸ್. ಪ್ರಕಾಶ, ವೆಂಕಟರಾವ್ ನಾಡಗೌಡ ಮತ್ತು ಸುನೀಲ್ ವಿ. ಹೆಗಡೆ ಅವರುಗಳು ಪ್ರಸ್ತುತ ಸಾಲಿನಲ್ಲಿ ನಷ್ಟ ಅನುಭವಿಸುತ್ತಿರುವ ಆಲೂಗೆಡ್ಡೆ ಬೆಳೆಗಾರರಿಗೆ ಪ್ರತಿ ಎಕರೆಗೆ ನೇರವಾಗಿ ಐದು ಸಾವಿರ ರೂ.ಗಳನ್ನು ನಗದು ರೂಪದಲ್ಲಿ ನೀಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ

3. ಶ್ರೀ ಟಿ.ಬಿ. ಜಯಚಂದ್ರ ಅವರು ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಕಳಂಬೆಳ್ಳ ಕೆರೆಯಿಂದ ಕುಡಿಯುವ ನೀರು ಸರಬರಾಜು ಮಾಡುವ ಎನ್.ಆರ್.ಡಬ್ಲ್ಯೂ.ಎಸ್.ಬಿ ಯೋಜನೆಯಡಿ ಸ್ವಾಧೀನಪಡಿಸಿಕೊಂಡ ರೈತರ ಜಮೀನಿಗೆ ಪರಿಹಾರ ಧನ ನಿಗದಿ ಮಾಡದಿರುವುದರಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿ (ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್) ಯವರ ಗಮನ ಸೆಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)